# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1416 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.03.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದ ಪೊಲೀಸ್ ಠಾಣೆಗಳಲ್ಲಿ ವರದಿಯಾಗಿರುವ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಮಾನ್ಯ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ನೀಡಿರುವ ಪ್ರಕರಣಗಳೆಷ್ಟು; (ವರ್ಷವಾರು ಮಾಹಿತಿ ನೀಡುವುದು)</td><td>ರಾಜ್ಯದ ಪೊಲೀಸ್ ಠಾಣೆಗಳಲ್ಲಿ ವರದಿಯಾಗಿರುವ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಮಾನ್ಯ ಉಚ್ಚ ನ್ಯಾಯಾಲಯದಿಂದ 4040 ಪ್ರಕರಣಗಳಿಗೆ ತಡೆಯಾಜ್ಞೆ ನೀಡಲಾಗಿದ್ದು, ವರ್ಷವಾರು ಮಾಹಿತಿಯನ್ನು ಈ ಕೆಳಕಂಡಂತೆ ಒದಗಿಸಲಾಗಿದೆ:-
<table>
<tr><th>ವರ್ಷ</th><th>ಪ್ರಕರಣಗಳ ಸಂಖ್ಯೆ</th></tr>
<tr><td>2020</td><td>147</td></tr>
<tr><td>2021</td><td>414</td></tr>
<tr><td>2022</td><td>806</td></tr>
<tr><td>2023</td><td>1468</td></tr>
<tr><td>2024</td><td>1205</td></tr>
</table></td></tr>
<tr><td>ಆ</td><td>ಸದರಿ ಪ್ರಕರಣಗಳಲ್ಲಿ ತನಿಖಾಧಿಕಾರಿಯವರ ಅಭಿಪ್ರಾಯ ಪಡೆದ ನಂತರ ತಡೆಯಾಜ್ಞೆ ನೀಡಿರುವ ಪಕ್ರರಣಗಳು ಎಷ್ಟು; ತನಿಖಾಧಿಕಾರಿಯವರ ಅಭಿಪ್ರಾಯ ಪಡೆಯದೇ ನೇರವಾಗಿ ತಡೆಯಾಜ್ಞೆ ನೀಡಿರುವ ಪ್ರಕರಣಗಳ ಸಂಖ್ಯೆ ಎಷ್ಟು;</td><td>ರಾಜ್ಯದ ಪೊಲೀಸ್ ಠಾಣೆಗಳಲ್ಲಿ ವರದಿಯಾಗಿರುವ ಪ್ರಕರಣಗಳಲ್ಲಿ ತನಿಖಾಧಿಕಾರಿಯವರ ಅಭಿಪ್ರಾಯ ಪಡೆದ ನಂತರ ತಡೆಯಾಜ್ಞೆ ನೀಡಿರುವ ಪ್ರಕರಣಗಳು ಮತ್ತು ತನಿಖಾಧಿಕಾರಿಯವರ ಅಭಿಪ್ರಾಯ ಪಡೆಯದೇ ನೇರವಾಗಿ ತಡೆಯಾಜ್ಞೆ ನೀಡಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:-
<table>
<tr><th>ತನಿಖಾಧಿಕಾರಿಯವರ ಅಭಿಪ್ರಾಯ ಪಡೆದ ನಂತರ ತಡೆಯಾಜ್ಞೆ ನೀಡಿರುವ ಪ್ರಕರಣಗಳು</th><th>ತನಿಖಾಧಿಕಾರಿಯವರ ಅಭಿಪ್ರಾಯ ಪಡೆಯದೇ ನೇರವಾಗಿ ತಡೆಯಾಜ್ಞೆ ನೀಡಿರುವ ಪ್ರಕರಣಗಳು</th></tr>
<tr><td>747</td><td>3293</td></tr>
</table></td></tr>
<tr><td>ಇ</td><td>ಬಹಳ ಪ್ರಕರಣಗಳಲ್ಲಿ ತನಿಖೆಗೆ ತಡೆಯಾಜ್ಞೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಪ್ರಕರಣಗಳಲ್ಲಿ ತನಿಖೆಗೆ ತಡೆಯಾಜ್ಞೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>ಈ</td><td>ಈ ತರಹ ತನಿಖೆಗೆ ತಡೆಯಾಜ್ಞೆ ಇರುವುದರಿಂದ ನೊಂದವರು ಠಾಣೆಗಳಲ್ಲಿ ದೂರುಗಳನ್ನು ದಾಖಲಿಸಿದ್ದು, ಈ ಕ್ರಮದಿಂದ ಅವರಿಗೆ ಅನ್ಯಾಯ ಆಗುವುದಿಲ್ಲವೆ; ತಡೆಯಾಜ್ಞೆ ತೆರವುಗೊಳಿಸದೇ ಇದ್ದಲ್ಲಿ ಪೊಲೀಸ್ ಇಲಾಖೆ ಮೇಲೆ ಇಟ್ಟಿರುವ ಭರವಸೆಯನ್ನು ಸಾರ್ವಜನಿಕರು ಕಳೆದುಕೊಂಡಂತೆ ಆಗುವುದಿಲ್ಲವೆ;</td><td>ಮಾನ್ಯ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ನೀಡಿರುವ ಪ್ರಕರಣಗಳಲ್ಲಿ ಕೂಡಲೇ ತಡೆಯಾಜ್ಞೆ ತೆರವುಗೊಳಿಸಲು ಕಂಡಿಕೆವಾರು ಷರಾ ಹಾಗೂ ಅಫಿಡವಿಟ್‌ಗಳನ್ನು ಮತ್ತು ನ್ಯಾಯಾಲಯದಿಂದ ಕೋರಿದ ದಾಖಲಾತಿಗಳನ್ನು ಸಲ್ಲಿಸಿ ತಡೆಯಾಜ್ಞೆ ತೆರವುಗೊಳಿಸಲು ಕಾನೂನು ಕ್ರಮ ಕೈಗೊಳ್ಳಲಾಗುತಿರುತ್ತದೆ.</td></tr>
<tr><td>ಉ</td><td>ಸರ್ಕಾರದ ಮಟ್ಟದಲ್ಲಿ ತಡೆಯಾಜ್ಞೆ ನೀಡುವ ಪ್ರಕರಣಗಳ ಬಗ್ಗೆ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರ ಗಮನಕ್ಕೆ ತರಲಾಗಿದೆಯೇ; ಈ ರೀತಿಯ ತಡೆ ನೀಡಿರುವುದರಿಂದ ಪೊಲೀಸ್ ತನಿಖೆಯ ಬಗ್ಗೆ ಅಪನಂಬಿಕೆ ಬರುವುದಿಲ್ಲವೇ?</td><td>ತನಿಖಾ ಹಂತದಲ್ಲಿದ್ದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯದಿಂದ ತಡೆಯಾಜ್ಞೆ ನೀಡಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರಿ ವಕೀಲರನ್ನು ಸಂಪರ್ಕಿಸಿ ಕಂಡಿಕೆವಾರು ಷರಾ ಹಾಗೂ ಅಫಿಡವಿಟ್‌ಗಳನ್ನು ಮತ್ತು ನ್ಯಾಯಾಲಯದಿಂದ ಕೋರಿದ ದಾಖಲಾತಿಗಳನ್ನು ಸಲ್ಲಿಸಿ ತಡೆಯಾಜ್ಞೆ ತೆರವುಗೊಳಿಸಲು ತ್ವರಿತ ಕ್ರಮ ಕೈಗೊಳ್ಳಲು ಸರ್ಕಾರದಿಂದ ಕಾಲ ಕಾಲಕ್ಕೆ ಸೂಚನೆ/ನಿರ್ದೇಶನಗಳನ್ನು ನೀಡಲಾಗುತ್ತದೆ.</td></tr>
</table>

ಸಂಖ್ಯೆ: ಹೆಚ್‌ಡಿ 39 ಪಿಸಿಕ್ಯೂ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು